**1 ನೇ ಹೆಚ್ಚುವರಿ ಸತ್ರ ಮತ್ತು ವಿಶೇಷ ನ್ಯಾಯಾಲಯ, ಚಿಕ್ಕಮಗಳೂರು**

**ಸ್ಪೆಷಲ್ ಮೊಕದ್ದಮೆ ನಂಃ 87/2017**

| | | |
|---|---|---|
| ಸಾಕ್ಷಿದಾರರ ಹೆಸರು | - ಇಕ್ಬಾಲ್ ಅಹಮದ್ | ಪಿಡಬ್ಲೂ -16 |
| ತಂದೆಯ ಹೆಸರು | - ಅಬ್ದುಲ್ ಖಾದರ್ | ಸಿಡಬ್ಲೂ -21 |
| ವಯಸ್ಸು | - 64 ವರ್ಷ | |
| ಉದ್ಯೋಗ | - ನಿವೃತ್ತ ಎ.ಎಸ್.ಐ. | |
| ವಾಸ ಸ್ಥಳ | - ಚಿಕ್ಕಮಗಳೂರು | |

ದಿನಾಂಕಃ 11-08-2025 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

1. 2014 ರಿಂದ ಅಕ್ಟೋಬರ್ 2017 ರವರೆಗೆ ಮೂಡಿಗೆರೆ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ಕಾರ್ಯ ನಿರ್ವಹಿಸಿದ್ದೇನೆ.

2. ದಿನಾಂಕಃ 05-04-2017 ರಂದು ನಾನು ಠಾಣಾಧಿಕಾರಿಯಾಗಿ ಕರ್ತವ್ಯದಲ್ಲಿದ್ದ ಸಮಯದಲ್ಲಿ ಮಧ್ಯಾಹ್ನ 1.15 ಗಂಟೆ ಸಮಯಕ್ಕೆ ಮೂಡಿಗೆರೆ ಎಂ.ಜಿ.ಎಂ. ಸರ್ಕಾರಿ ಆಸ್ಪತ್ರೆಯಿಂದ ಬಂದ ಎಂ.ಎಲ್.ಸಿ. ಮೆಮೋವನ್ನು ಸ್ವೀಕರಿಸಿರುತ್ತೇನೆ. ಸದರಿ ಮೆಮೋವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ.37 ಎಂದು ಸಾಕ್ಷಿಯ ಸಹಿಯನ್ನು ನಿಪಿ.37(ಎ) ಎಂದು ಗುರುತಿಸಲಾಯಿತು. ಸದರಿ ಮೆಮೋದಲ್ಲಿ ಕೆಸವಳಲು ಗ್ರಾಮದ ವಾಸಿಗಳಾದ ದಿವಾಕರ್ ಮತ್ತು ಗೋಪಾಲ

ಎಂಬುವವರು ಹಲ್ಲೆಯ ಹಿನ್ನಲೆಯಲ್ಲಿ ಸದರಿ ಆಸ್ಪತ್ರೆಯಲ್ಲಿ ಕ್ರಮವಾಗಿ ಹೊರರೋಗಿ ಮತ್ತು ಒಳರೋಗಿಯಾಗಿ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದ ಬಗ್ಗೆ ತಿಳಿಸಲಾಗಿತ್ತು.

3. ನಂತರ ನಾನು ಅದೇ ದಿನ ಮಧ್ಯಾಹ್ಣ 1.30 ಗಂಟೆಗೆ ಸದರಿ ಆಸ್ಪತ್ರೆಗೆ ಭೇಟಿ ನೀಡಿ ಸದರಿ ಆಸ್ಪತ್ರೆಯಲ್ಲಿ ಹಾಜರಿದ್ದ ಆಟೋ ಚಾಲಕನಾದ ಕೆಸವಳಲು ಗ್ರಾಮದ ವಾಸಿಯಾದ ಪ್ರಾಸಾ.1 ಶಶಿಕುಮಾರ ಬಿನ್ ಮಂಜಯ್ಯರವರು ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಅದೇ ದಿನ ಮಧ್ಯಾಹ್ಣ 2 ಗಂಟೆಗೆ ಠಾಣೆಗೆ ಹಿಂತಿರುಗಿ ಠಾಣೆಯಲ್ಲಿದ್ದ ಚಾಸಾ.22 ರವರಿಗೆ ಸದರಿ ದೂರನ್ನು ನೀಡಿದೆನು. ಸಾಕ್ಷಿಯು ಸದರಿ ದೂರು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿ,ರುತ್ತಾರೆ. ಸದರಿ ದೂರನ್ನು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿಯ ಪರವಾಗಿ ಶ್ರೀ ಹೆಚ್.ಎ.ಟಿ. ವಕೀಲರಿಂದಃ</u>

4. ಮೂಡಿಗೆರೆ ಠಾಣೆಯಿಂದ ಮೂಡಿಗೆರೆ ಸರ್ಕಾರಿ ಆಸ್ಪತ್ರೆಗೆ ಒಂದು ಕಿ.ಮೀ ದೂರವಾಗುತ್ತದೆ ಮತ್ತು ಬೈಕಿನಲ್ಲಿ ನಮ್ಮ ಠಾಣೆಯಿಂದ ಅಲ್ಲಿಗೆ ಹೋಗಲು 10 ನಿಮಿಷ ಬೇಕಾಗುತ್ತದೆ. ನಾನು ಆಸ್ಪತ್ರೆಗೆ ಹೋಗುವ ಮೊದಲೇ ಫಿರ್ಯಾದಿ ದೂರನ್ನು ತಯಾರಿಸಿದ್ದರು. ನಿಪಿ.1 ದೂರನ್ನು ಯಾರು ಬರೆದಿದ್ದರು ಎಂದು ನನಗೆ ಮಾಹಿತಿ ಇಲ್ಲ. ಸದರಿ ದೂರಿನಲ್ಲಿ ಕಂಡುಬರುವ

ಸಹಿ ಯಾರದ್ದು ಎಂದು ನಿಮಗೆ ಗೊತ್ತಿಲ್ಲ ಎಂದರೆ ಸಾಕ್ಷಿ ಶಶಿಕುಮಾರವರ ಸಹಿ ಇರಬಹುದು, ಆದರೆ ಅವರು ನನ್ನ ಸಮಕ್ಷಮ ಸಹಿ ಮಾಡಿಲ್ಲ ಎನ್ನುತ್ತಾರೆ. ನೀವು ಸದರಿ ಆಸ್ಪತ್ರೆಗೆ ಭೇಟಿ ನೀಡಿದಾಗ ಫ್ರಾಸಾ.1 ರವರು ಒಳರೋಗಿ ಅಥವಾ ಹೊರರೋಗಿಯಾಗಿ ಚಿಕಿತ್ಸೆ ಪಡೆಯುತ್ತಿರಲಿಲ್ಲ ಎಂದರೆ ಸರಿ. ನೀವು ಫ್ರಾಸಾ.1 ರವರಿಂದ ನಿಪಿ.1 ದೂರನ್ನು ಸ್ವೀಕರಿಸಿದ್ದನ್ನು ಹೊರತುಪಡಿಸಿ ನೀವು ಆಸ್ಪತ್ರೆಗೆ ಭೇಟಿ ನೀಡಿದಾಗ ಅಲ್ಲಿ ಒಳರೋಗಿಯಾಗಿ ಮತ್ತು ಹೊರರೋಗಿಯಾಗಿ ಚಿಕಿತ್ಸೆ ಪಡೆಯುತ್ತಿದ್ದ ವ್ಯಕ್ತಿಗಳನ್ನು ವಿಚಾರಿಸಿದ್ದೀರಾ ಎಂದರೆ ಸಾಕ್ಷಿ ವಿಚಾರಿಸಿದ್ದೆನು ಎನ್ನುತ್ತಾರೆ. ದೂರನ್ನು ನೀಡಲು ಏಕೆ ತಡವಾಯಿತು ಎಂದು ನೀವು ಫ್ರಾಸಾ.1 ರವರನ್ನು ವಿಚಾರಿಸಿ ತಿಳಿದು ಕೊಂಡಿದ್ದೀರಾ ಎಂದರೆ ಸಾಕ್ಷಿ ಇಲ್ಲ ಎನ್ನುತ್ತಾರೆ.

5. ನೀವು ಹೇಳಿದ ದಿನಾಂಕ ಮತ್ತು ಸಮಯಕ್ಕೆ ಮೂಡಿಗೆರೆ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿದ್ದಾಗಿ, ಅಲ್ಲಿ ಫ್ರಾಸಾ.1 ರವರಿಂದ ನಿಪಿ.1 ರಂತೆ ದೂರನ್ನು ಸ್ವೀಕರಿಸಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ನಾನು ಸದರಿ ಆಸ್ಪತ್ರೆಗೆ ಭೇಟಿ ನೀಡಿದ ಸಮಯದಲ್ಲಿ ನಿಪಿ.37 ರಂತೆ ಮಾಹಿತಿ ನೀಡಿದ್ದ ವೈದ್ಯರನ್ನು ಭೇಟಿ ಮಾಡಿ ವಿಚಾರಿಸಿಲ್ಲ. ನೀವು ಹೇಳಿದಂತೆ ಯಾವುದೇ ಕರ್ತವ್ಯವನ್ನು ನಿರ್ವಹಿಸದೇ ಇದ್ದರೂ ಸಹ ನಿಮ್ಮ ಮೇಲಾಧಿಕಾರಿಗಳ ಮಾತನ್ನು ಕೇಳಿ ಪ್ರಕರಣಕ್ಕೆ ಅನುಕೂಲವಾಗುವಂತೆ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು )
ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ